ಮತ್ತೆ ಇದರ ಬಗ್ಗೆ ಅವರು ಹಣವನ್ನು ಬಿಡುಗಡೆಮಾಡಲು ತಯಾರಿಲ್ಲ ಎಂದು ಹೇಳಿ ಇದು ತೋರಿಸುತ್ತಿದೆ. ಅದಕ್ಕಾಗಿ ನಾವು ಇದನ್ನು ಪ್ರತಿಭಟಿಸಿ ವಾಕೌಟ್ ಮಾಡುತ್ತೇವೆ ತಮ್ಮ ಮಾತಿಗೆ ಮನ್ನಣೆ ಕೊಡುತ್ತೇವೆ.

Mr. SPEAKER: Thank you. I am grateful to you.

(ವಿರೋಧ ಪಕ್ಷದ ನಾಯಕರಾದ ಶ್ರೀ ಮಲ್ಲಿಕಾರ್ಜುನ ಖರ್ಗೆಯವರು ಹಾಗೂ ಕಾಂಗ್ರೆಸ್ ಪಕ್ಷದ ಸದಸ್ಯರುಗಳು ಸಭಾ ತ್ಯಾಗ ಮಾಡಿದರು)

ಅಧ್ಯಕ್ಷರು:- ಈಗ ಪ್ರಸ್ತಾವವನ್ನು ಮತಕ್ಕೆ ಹಾಕುತ್ತೇನೆ.

ಪ್ರಸ್ತಾವ ಹೀಗಿದೆ: "ಮಾರ್ಚ್ 9, 1998ರಂದು ವಿಧಾನ ಮಂಡಲದ ಸದಸ್ಯರನ್ನು ಉದ್ದೇಶಿಸಿ ದಯಪಾಲಿಸ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾ ಪೂರ್ವಕವಾದ ವಂದನೆಗಳನ್ನು ಸಲ್ಲಿಸಲು ಅಪ್ಪಣೆ ಕೋರುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು
(ವಂದನಾ ನಿರ್ಣಯದ ಪ್ರಸ್ತಾವಕ್ಕೆ ಸದನವು ಅನುಮೋದನೆ ನೀಡಿತು)

-0-

ಅಧ್ಯಕ್ಷರು:- ವಂದನಾ ನಿರ್ಣಯವನ್ನು ಸನ್ಮಾನ್ಯ ರಾಜ್ಯಪಾಲರಿಗೆ ಕಳುಹಿಸಿಕೊಡಲಾಗುವುದು. ಸಭೆಯನ್ನು ಈಗ ಮುಂದೂಡಲಾಗಿದೆ. ಪುನಃ ಸಭೆಯು ನಾಳೆ 11.30ಕ್ಕೆ ಸಮಾವೇಶಗೊಳ್ಳುತ್ತದೆ.

(ಸದನವು ಸಂಜೆ 6.15ಕ್ಕೆ ಮುಂದೂಡಲ್ಪಟ್ಟು ಮತ್ತೆ ದಿನಾಂಕ 18ನೇ ಮಾರ್ಚ್ 1998ರಂದು ಬೆಳಿಗ್ಗೆ 11.30ಕ್ಕೆ ಸಮಾವೇಶಗೊಳ್ಳಲು ನಿಶ್ಚಯಿಸಿತು)

00000

(+ ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ)